Akashvani: Bangalore
Regional Bulletin In Kannada
02.01.2026 : 14.30hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
02.01.2026 : 14.30hrs
*********

ಮುಖ್ಯಾಂಶಗಳು :

1. ರಾಜಕೀಯ ಸ್ವಾತಂತ್ರ್ಯದ ಯಶಸ್ಸಿಗೆ ಆರ್ಥಿಕ, ಸಾಮಾಜಿಕ ಸ್ವಾತಂತ್ರ್ಯ ಅಗತ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ
2. ಬಳ್ಳಾರಿ ಘರ್ಷಣೆ: ಓರ್ವ ಸಾವು; ಹಲವರಿಗೆ ಗಾಯ - ಮಾಜಿ ಸಚಿವ ಜನಾರ್ದನ ರೆಡ್ಡಿ ಸೇರಿದಂತೆ ಹಲವರ ಮೇಲೆ ಪ್ರಕರಣ ದಾಖಲು
3. ಬಳ್ಳಾರಿ ಪ್ರಕರಣ; ನಿಷ್ಪಕ್ಷಪಾತ ಕ್ರಮ ಕೈಗೊಳ್ಳುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಬಿಜೆಪಿ ನಿಯೋಗ ಆಗ್ರಹ
4. ವಿದ್ಯಾರ್ಥಿನಿಯರಿಗೂ ಮುಟ್ಟಿನ ರಜೆ ನೀಡುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಒತ್ತಾಯ

********

ರಾಜಕೀಯ ಸ್ವಾತಂತ್ರ್ಯ ಯಶಸ್ವಿಯಾಗಬೇಕಾದರೆ ಸಾಮಾಜಿಕ, ಆರ್ಥಿಕ ಸ್ವಾತಂತ್ರ್ಯ ಯಶಸ್ವಿಯಾಗಬೇಕು. ಅಸಮಾನತೆಯನ್ನು ಹೋಗಲಾಡಿಸಿ, ಸಮಾನತೆಯನ್ನು ಸಾಧಿಸಿದಾಗ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಅವರು, ಕರ್ನಾಟಕ ಆಡಳಿತ ಸೇವೆ ಅಧಿಕಾರಿಗಳ ಸಂಘದ ದಿನಚರಿ ಮತ್ತು ಕ್ಯಾಲೆಂಡರ್‌ಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.

*****ಧ್ವನಿ****ಮುಖ್ಯಮಂತ್ರಿ

ಎಲ್ಲಾ ಅಧಿಕಾರಿಗಳು ಜಾತ್ಯಾತೀತ ದೃಷ್ಟಿಕೋನದಿಂದ ಕಾರ್ಯ ನಿರ್ವಹಿಸಬೇಕು. ಆಗಮಾತ್ರ ಸಮಸಮಾಜ ನಿರ್ಮಾಣ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಈ ಸಂದರ್ಭದಲ್ಲಿ ಸಚಿವರಾದ ಈಶ್ವರ ಖಂಡ್ರೆ, ಭೈರತಿ ಸುರೇಶ್, ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಕಾನೂನು ಸಲಹೆಗಾರರಾದ ಎ ಎಸ್ ಪೊನ್ನಣ್ಣ, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

*******

ಬಳ್ಳಾರಿ ನಗರದ ವಾಲ್ಮೀಕಿ ಸರ್ಕಲ್‌ನಲ್ಲಿ ನಾಳೆ ನಡೆಯಲಿದ್ದ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ ಹಿನ್ನೆಲೆಯಲ್ಲಿ ಬ್ಯಾನರ್ ಕಟ್ಟುವ ಕುರಿತು ನಡೆದ ಘರ್ಷಣೆಯಲ್ಲಿ ಗುಂಡೇಟಿಗೆ ಓರ್ವ ಯುವಕ ಸಾವಿಗೀಡಾದ ಘಟನೆ ವರದಿಯಾಗಿದೆ. ನಿನ್ನೆ ಕಾಂಗ್ರೆಸ್ ಕಾರ್ಯಕರ್ತರು ಜನಾರ್ಧನರೆಡ್ಡಿ ಅವರ ಮನೆ ಹತ್ತಿರ ಬ್ಯಾನರ್ ಕಟ್ಟುವಾಗ ನಡೆದ ಗಲಾಟೆ ಪ್ರಕಟಣದಲ್ಲಿ, ಫೈರಿಂಗ್, ಕಲ್ಲು, ಕಾರಪುಡಿ, ಗಾಜಿನ

ಬಾಟಲ್‌ಗಳ ತೂರಾಟದಲ್ಲಿ ಹಲವರು ಗಾಯಗೊಂಡಿದ್ದು, ಗುಂಡೇಟಿಗೆ ಹುಸೇನ್ ನಗರದ ಓರ್ವ ಯುವಕ ಬಲಿಯಾಗಿದ್ದಾನೆ. ಎರಡೂ ಗುಂಪಿನ ಹಲವರು ಹಾಗೂ ಪೊಲೀಸರು ಸೇರಿದಂತೆ ಅನೇಕರು ಗಾಯಗೊಂಡಿದ್ದಾರೆ. ಸದ್ಯ ನಗರದಲ್ಲಿ ಪೊಲೀಸ್ ಪಡೆಗಳು ಬೀಡು ಬಿಟ್ಟಿದ್ದು, ನಿಷೇಧಾಜ್ಞೆ ಹೇರಲಾಗಿದೆ. ಸಂಜೆ ೬.೩೦ರ ಸುಮಾರಿಗೆ ನಗರದ ಶಾಸಕ ಭರತ್ ರೆಡ್ಡಿ ಅವರ ಆಪ್ತ, ಸತೀಶ್ ರೆಡ್ಡಿ ಇದ್ದು ಬ್ಯಾನರ್ ಗಳನ್ನು ತಮ್ಮ ಬೆಂಬಲಿಗರೊಂದಿಗೆ ಜನಾರ್ಧನ ರೆಡ್ಡಿ ಅವರ ಮನೆ ಮುಂದಿನ ರಸ್ತೆಯಲ್ಲೇ ಕಟ್ಟಿಸಲು ಮುಂದಾದಾಗ ಮಾಜಿ ಸಚಿವ ಶ್ರೀರಾಮುಲು ಆಕ್ಷೇಪ ವ್ಯಕ್ತಪಡಿಸಿದ್ದರು. ಇಬ್ಬರ ನಡುವೆ ವಾಗ್ವಾದ ನಡೆದು, ಎರಡು ಗುಂಪುಗಳು ಪರಸ್ಪರ ಸಂಘರ್ಷಕ್ಕೆ ಮುಂದಾಗಿದ್ದಾರೆ.

ಇದೇ ವೇಳೆ ಗಂಗಾವತಿ ಶಾಸಕ ಜನಾರ್ಧನ ರೆಡ್ಡಿ ಆಗಮನವಾದಾಗ ಪರಿಸ್ಥಿತಿ ವಿಕೋಪಕ್ಕೆ ಹೋಗಿದೆ. ಸತೀಶ್ ರೆಡ್ಡಿ ಅವರ ಖಾಸಗಿ ಗನ್ ಮ್ಯಾನ್ ಗುಂಡು ಹಾರಿಸಿರುವುದಾಗಿ ವರದಿಯಾಗಿದೆ. ಎಎಸ್ಪಿ ರವಿಕುಮಾರ್ ನೇತೃತ್ವದಲ್ಲಿ ಪೊಲೀಸರು ಪರಿಸ್ಥಿತಿ ನಿಯಂತ್ರಣ ಮಾಡಿದ್ದಾರೆ. ಗಲಾಟೆಯಲ್ಲಿ ಗಾಯಗೊಂಡ ಸತೀಶ್ ರೆಡ್ಡಿ ಹಾಗೂ ಇತರ ಮೂವರನ್ನು ನಗರದ ಟ್ರಾಮಕೇರ್ ಸೆಂಟರ್‌ಗೆ ಚಿಕಿತ್ಸೆಗೆ ದಾಖಲಿಸಲಾಯಿತು. ತೀವ್ರ ಗಾಯಗೊಂಡ ಸತೀಶ್ ರೆಡ್ಡಿಯನ್ನು ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿಗೆ ಕರೆತರಲಾಗಿದೆ. ಪರಿಸ್ಥಿತಿ ಕೈಮೀರಿದಾಗ ಪೊಲೀಸರು ಗಾಳಿಯಲ್ಲಿ ಗುಂಡು ಹಾರಿಸಿದರು. ಇದೇ ಸಂದರ್ಭದಲ್ಲಿ ಸತೀಶ್ ರೆಡ್ಡಿ ಅವರ ಗನ್ ಮ್ಯಾನ್ ಪೈರ್ ಮಾಡಿರುವುದಾಗಿ ವರದಿಯಾಗಿದ್ದು, ಈ ವೇಳೆ ಹುಸೇನ್ ನಗರದ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ ರೆಡ್ಡಿಗೆ ಗುಂಡು ತಗುಲಿ ಸಾವನ್ನಪ್ಪಿದ್ದಾನೆ. ಹೆಚ್ಚಿನ ಪೊಲೀಸ್ ಸಿಬ್ಬಂದಿ ಆಗಮಿಸಿದ್ದು, ಪರಿಸ್ಥಿತಿ ಹತೋಟಿಯಲ್ಲಿದೆ. ಘಟನೆಗೆ ಸಂಬಂಧಿಸಿದಂತೆ ಗಂಗಾವತಿ ಶಾಸಕ ಜನಾರ್ಧನರೆಡ್ಡಿ, ಮಾಜಿ ಶಾಸಕ ಜಿ.ಸೋಮಶೇಖರ ರೆಡ್ಡಿ, ಮಾಜಿ ಸಚಿವ ಬಿ. ಶ್ರೀರಾಮುಲು, ಪಾಲಿಕೆ ಸದಸ್ಯ ಮೋತ್ಕರ್ ಶ್ರೀನಿವಾಸ್, ಪ್ರಕಾಶ್ ರೆಡ್ಡಿ, ರಾಮಣ್ಣ, ಬುಡಾ ಮಾಜಿ ಅಧ್ಯಕ್ಷರುಗಳಾದ ಪಿ.ಪಾಲಣ್ಣ, ದಮ್ಮೂರ್ ಶೇಖರ್, ಮಾರುತಿ ಎಸ್.ಪ್ರಸಾದ್, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ಜನಾರ್ಧನರೆಡ್ಡಿ ಆಪ್ತ ಅಲಿಖಾನ್ ಮತ್ತಿತರರ ಮೇಲೆ ಬ್ರೂಸ್ ಪೇಟೆ ಠಾಣೆಯಲ್ಲಿ ಕೇಸು ದಾಖಲಾಗಿದೆ. ನಿನ್ನೆ ರಾತ್ರಿ ನಗರದಲ್ಲಿ ನಡೆದ ಪೈರಿಂಗ್‌ನಲ್ಲಿ ಗುಂಡು ಹಾರಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತಿ ಕ್ರಮ ಜರುಗಿಸಬೇಕು. ಹಾಲಿ ನ್ಯಾಯಾಧೀಶರಿಂದ ಅಥವಾ ಸಿಬಿಐನಿಂದ ತನಿಖೆ ಆಗಲಿ ಎಂದು ಬಿಜೆಪಿ ಮುಖಂಡ, ಮಾಜಿ ಸಚಿವ ಬಿ.ಶ್ರೀರಾಮುಲು ಆಗ್ರಹಿಸಿದ್ದಾರೆ.

********

ಬಳ್ಳಾರಿಯಲ್ಲಿ ನಡೆದ ಗಲಭೆ ಪ್ರಕರಣದಲ್ಲಿ ಕಾನೂನುಬಾಹಿರವಾಗಿ ಗುಂಪು ಸೇರಿ, ಗುಂಡೇಟಿನಿಂದ ಓರ್ವ ವ್ಯಕ್ತಿ ಮೃತಪಟ್ಟಿದ್ದು, ಬಳ್ಳಾರಿಯಲ್ಲಿ ಕಾನೂನು ಪರಿಸ್ಥಿತಿ ಹದಗೆಟ್ಟಿದೆ. ಈ ಕುರಿತು ನಿಷ್ಪಕ್ಷಪಾತ ಕಾನೂನು ಕ್ರಮ ಕೈಗೊಳ್ಳುವಂತೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಪೊಲೀಸ್ ಮಹಾನಿರ್ದೇಶಕ ಹಾಗೂ ಮಹಾನಿರೀಕ್ಷಕರಿಗೆ ಪತ್ರ ಬರೆದಿದ್ದಾರೆ. ಅವರು ತಮ್ಮ ಪತ್ರದಲ್ಲಿ ಬಳ್ಳಾರಿ ಶಾಸಕ ಭರತ್ ರೆಡ್ಡಿ ಅವರು, ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಅವರ ಹತ್ಯೆಗೆ ಸಂಚು ರೂಪಿಸಿದ್ದರು, ಜನಾರ್ದನರೆಡ್ಡಿ ಹಾಗೂ ಶ್ರೀರಾಮುಲು ಜೀವಕ್ಕೆ ಅಪಾಯವಿದ್ದು, ಪೊಲೀಸರು ರಕ್ಷಣೆ ನೀಡಬೇಕು ಎಂದು ಕೋರಿದ್ದಾರೆ. ಬಿಜೆಪಿಯ ನಿಯೋಗ ಇಂದು ಪೊಲೀಸ್ ಮಹಾನಿರ್ದೇಶಕರನ್ನು ಭೇಟಿ ಮಾಡಿ, ಘಟನೆಯ ಕುರಿತು ಚರ್ಚಿಸಿತು. ನಿಯೋಗದಲ್ಲಿ ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವರು ನಿಯೋಗದಲ್ಲಿದ್ದರು.

********

ಚುನಾವಣಾ ಪ್ರಕ್ರಿಯೆಯು ಪ್ರಜಾಪ್ರಭುತ್ವದ ಅಡಿಪಾಯವಾಗಿದ್ದು, ಚುನಾವಣೆಗಳ ಬಗ್ಗೆ ನಾಗರಿಕರ ಜ್ಞಾನ, ವರ್ತನೆಗಳು ಮತ್ತು ಆಚರಣೆಗಳು (KAP) ಚುನಾವಣಾ ಭಾಗವಹಿಸುವಿಕೆ ಮತ್ತು ಪ್ರಜಾಪ್ರಭುತ್ವ ನಂಬಿಕೆಯನ್ನು ಬಲಪಡಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಮುಖ್ಯ ಚುನಾವಣಾ ಅಧಿಕಾರಿ ವಿ. ಅನ್ಬುಕುಮಾರ್ ತಿಳಿಸಿದ್ದಾರೆ. ಕರ್ನಾಟಕದಲ್ಲಿ ೨೦೨೪ರ ಲೋಕಸಭಾ ಚುನಾವಣೆಯ ಸಮಯದಲ್ಲಿ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣಾ ಭಾಗವಹಿಸುವಿಕೆ - ಸ್ವೀಪ್ ಉಪಕ್ರಮಗಳ ಫಲಿತಾಂಶಗಳನ್ನು ಮೌಲ್ಯಮಾಪನ ಮಾಡಲು, ಕೆಲಸವನ್ನು ಕರ್ನಾಟಕ ಮಾನಿಟರಿಂಗ್ ಮತ್ತು ಮೌಲ್ಯಮಾಪನ ಪ್ರಾಧಿಕಾರಕ್ಕೆ ವಹಿಸಲಾಗಿದೆ. ಈ ಅಧ್ಯಯನಕ್ಕೆ "ಲೋಕಸಭೆ ಚುನಾವಣೆಗಳು ೨೦೨೪ - ನಾಗರಿಕರ ಜ್ಞಾನ, ವರ್ತನೆ ಮತ್ತು ಅಭ್ಯಾಸದ (KAP) ಅಂತಿಮ ಸಮೀಕ್ಷೆಯ ಮೌಲ್ಯಮಾಪನ" ಎಂದು ಹೆಸರಿಸಲಾಗಿದೆ.

********

ವಿದ್ಯಾರ್ಥಿನಿಯರಿಗೂ ಮುಟ್ಟಿನ ರಜೆ ನೀಡುವ ಕುರಿತಂತೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯೆ ಅಪರ್ಣಾ ಎಂ ಕೊಳ್ಳಾ ಹೇಳಿದ್ದಾರೆ.

ದಾವಣಗೆರೆಯಲ್ಲಿಂದು ನಿಮ್ಮ ಹಕ್ಕು ನಮ್ಮ ಧ್ವನಿ ಕಾರ್ಯಕ್ರಮದಡಿ ಮಕ್ಕಳೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಪ್ರೌಢಶಾಲಾ ವಿದ್ಯಾರ್ಥಿನಿ ಕೇಳಿದ ಪ್ರಶ್ನೆಗೆ ಅವರು ಉತ್ತರಿಸಿದರು.

ಕೆಲಸ ಮಾಡುವ ಮಹಿಳೆಯರಿಗೆ ಮುಟ್ಟಿನ ರಜೆ ನೀಡಿರುವುದು ರಾಜ್ಯ ಸರ್ಕಾರದ ತೀರ್ಮಾನವಾಗಿದ್ದು, ವಿದ್ಯಾರ್ಥಿನಿಯರಿಗೂ ಈ ಸೌಲಭ್ಯ ನೀಡಿಕೆಯ ತೀರ್ಮಾನವನ್ನೂ ಕೂಡ ಸರ್ಕಾರವೇ ತಗೆದುಕೊಳ್ಳಬೇಕು. ಈ ಸಂಬಂಧ ಮಕ್ಕಳ ರಕ್ಷಣಾ ಆಯೋಗ ಸರ್ಕಾರದ ಗಮನಕ್ಕೆ ತರಲಿದೆ ಎಂದು ಹೇಳಿದರು.

*** ಧ್ವನಿ ****ಅಪರ್ಣಾ ಕೊಳ್ಳ

ಸಾರಿಗೆ ಸಂಪರ್ಕ ಇಲ್ಲದ ಕಡೆಗಳಲ್ಲಿ ವಿದ್ಯಾರ್ಥಿಗಳು ಸರಿಯಾದ ಸಮಯಕ್ಕೆ ಶಾಲೆಗೆ ಆಗಮಿಸಲು ಕೆಎಸ್‌ಆರ್‌ಟಿಸಿ ಬಸ್‌ಗಳ ವ್ಯವಸ್ಥೆ ಕಲ್ಪಿಸುವ ಕುರಿತು ನಿಗಮದ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಮಾತನಾಡಲಾಗುವುದು ಎಂದು ಇದೇ ವೇಳೆ ಅಪರ್ಣಾ ಕೊಳ್ಳಾ ಹೇಳಿದರು.

********

೨೦೨೬ ಹೊಸ ವರ್ಷ ಆಚರಣೆ ಸಂದರ್ಭದಲ್ಲಿ ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿನ ಪ್ರಮುಖ ರಸ್ತೆಗಳಲ್ಲಿ ಉತ್ಪತ್ತಿಯಾದ ಸುಮಾರು ೯ ಟನ್ ತ್ಯಾಜ್ಯವನ್ನು ಬೆಂಗಳೂರು ಕೇಂದ್ರ ನಗರ ಪಾಲಿಕೆ ವತಿಯಿಂದ ಅತ್ಯಂತ ಕಡಿಮೆ ೫ ಗಂಟೆಗಳ ಕಾಲದ ಅವಧಿಯಲ್ಲಿ ತೆರವು, ಪಾದಚಾರಿ ಹಾಗೂ ರಸ್ತೆಗಳನ್ನು ಸ್ವಚ್ಛಗೊಳಿಸಿರುವ ಕಾರ್ಯವನ್ನು ಕೇಂದ್ರ ಸರ್ಕಾರದ ಸ್ವಚ್ಛ ಭಾರತ ಮಿಷನ್ ಶ್ಲಾಘಿಸಿದೆ.

****END****